Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡೆಲ್ ಅಧಿಕಾರಿಗಳು/ಸಹಾಯಕ ಅಭಿಯಂತರರ ಕಛೇರಿ ನಾಗಪುರ ಉಪವಿಭಾಗ, ಬಿ.ಬಿ.ಎಂ.ಪಿ,
12ನೇ ಮುಖ್ಯರಸ್ತೆ, 11ನೇ ಕ್ರಾಸ್, ನಾಗಪುರ, ಬಿಬಿಎಂಪಿ ಕಛೇರಿ ಸಂಕೀರ್ಣ ಕಟ್ಟಡ, ಮಹಾಲಕ್ಷ್ಮೀಲೇಔಟ್,ಬೆಂಗಳೂರು-86,

## ದಿನಾಂಕ:-19-02-2022 ರಂದು ನಡೆದ ವಾರ್ಡ್ ಸಂಖ್ಯೆ:67ರ ವಾರ್ಡ್ ಸಮಿತಿ ಸಭೆಯ ನಡವಳಿ

ಉಲ್ಲೇಖ:- (1) ಸಮಿತಿ ಸಭೆ ಸೂಚಿ ಪತ್ರ ಸಂಖ್ಯ:ಬಿ12(5)/ಪಿಆರ್/35/2020-21 ದಿನಾಂಕ:21:09:2020
(2)ಸಭೆ ಸೂಚನಾ ಪತ್ರ ಸಂ. ಸ.ಅ./ವಾ-67/ಪಿ.ಆರ್/38/2021-22 ದಿನಾಂಕ:03-02-2022

| ಕ್ರ.ಸ. | ಶ್ರೀಯುತರ ಹೆಸರು | ಹುದ್ದೆ |
|---|---|---|
| 1. | ಶ್ರೀ. ವಿಶ್ವನಾಥ್ | ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ನೋಡೆಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಂಖ್ಯೆ:67 |
| 2. | ಶ್ರೀ. ಬಿ. ಸಿ ರವಿಕುಮಾರ್ | ಸಹಾಯಕ ಅಭಿಯಂತರು ವಾರ್ಡ-67 ಹಾಗು ಸಮಿತಿ ಕಾರ್ಯದರ್ಶಿಗಳು |
| 3. | ಶ್ರೀ.ಉದಯ ಶಂಕರ್ | 1ನೇ 'ಆರ್'ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು. |
| 4. | ಶ್ರೀ. ರಂಗರಾಜು | 1ನೇ 'ಎನ್'ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘ. |
| 5. | ಶ್ರೀ. ಗಂಗಯ್ಯ | ಹಿರಿಯ ಆರೋಗ್ಯ ಪರೀವಿಕ್ಷಕರು, ವಾರ್ಡ್ ಸಂಖ್ಯೆ-67 |
| 6. | ಶ್ರೀ.ಸೋಮನಾಥ್, | ಸಹಾಯಕ ಅಭಿಯಂತರರು, ಬೆಂ.ಜ.ಮಂ. ಎನ್.ಡಬ್ಲೂ-1 |
| 7. | ಶ್ರೀ. ಪವನ್ ಕುಮಾರ್, | ಜಲ ಪರೀವಿಕ್ಷಕರು, ಬೆಂ.ಜ.ಮಂ. ಎನ್.ಡಬ್ಲೂ-1 |
| 8. | ಶ್ರೀ.ಆನಂದ್ ಮೂರ್ತಿ | ಸಹಾಯಕ ಅಭಿಯಂತರರು, ಬೆಸ್ಕಂ ಎನ್1 ಉಪವಿಭಾಗ. |
| 9. | ಶ್ರೀ. ಮಲ್ಲಯ್ಯ | ಅರಣ್ಯ ಇಲಾಖೆ ಸಿಬ್ಬಂಧಿ, ಮೇಸ್ತ್ರಿ. |
| 10. | ಶ್ರೀ .ಮಂಜುನಾಥ್ | ತೋಟಗಾರಿಕೆ ಇಲಾಖೆ ಮೇಸ್ತ್ರಿ, ಪಶ್ಚಿಮ ವಲಯ. |
| 11. | ಶ್ರೀ. ಛಾಯಾಪತಿ (ಪ್ರಭಾರ ವಾರ್ಡ್-44) | ಕಿರಿಯ ಆರೋಗ್ಯ ಪರೀವಿಕ್ಷಕರು, ವಾರ್ಡ್ -67 |
| 12. | ಶ್ರೀ. ಎಚ್ ಎನ್ ರಾಮಾ | ಪೋಲಿಸ್ ಎ.ಎಸ್.ಐ ಮಹಾಲಕ್ಷ್ಮೀಲೇಔಟ್ ಪೊಲೀಸ್ ಠಾಣೆ. |
| 13. | ಶ್ರೀ. ಮಂಜು | ಪೋಲಿಸ್ ಎ.ಎಸ್.ಐ(ಸಂಚಾರಿ) ರಾಜಾಜಿನಗರ ಪೊಲೀಸ್ ಠಾಣೆ. |
| 14. | ಶ್ರೀಮತಿ. ಆಶಾ | ಸಹಾಯಕ ಕಾರ್ಯಪಾಲಕ ಅಭಿಯಂತರರು. ಬೋರ್‌ವೆಲ್ ವಿಭಾಗ |
| 15. | ಶ್ರೀ.ಗುರುಮೂರ್ತಿ | ಘ.ತ್ಯಾ.ನಿ ವಿಭಾಗದ ಸೂಪರ್‌ವೈಸರ್ |



ಪು.ತಿ.ನೋ.

Scanned by CamScanner

| | | |
|---|---|---|
| 16. | ಶ್ರೀ.ನಾಗರಾಜು | ಬೋರ್‌ವೆಲ್ ನಿರ್ವಹಣೆ ಗುತ್ತಿಗೆದಾರರು. |
| 17. | ಸುಬ್ರಮಣ್ಯನಗರ ಪೊಲೀಸ್ ಠಾಣೆ | ಗೈರು ಹಾಜರಿ |
| 18. | ಮಲ್ಲೇಶ್ವರಂ ಪೊಲೀಸ್ ಠಾಣೆ (ಸಂಚಾರಿ) | ಗೈರು ಹಾಜರಿ |
| 19. | ಸಹಾಯಕ ಅಭಿಯಂತರರು ಬೆಂ.ಜ.ಮಂ ಎಸ್.ಡಬ್ಲ್ಯೂ-2 | ಗೈರು ಹಾಜರಿ |
| 20. | ಅರಣ್ಯ ಇಲಾಖೆ | ಗೈರು ಹಾಜರಿ |
| 21. | ಸಹಾಯಕ ಅಭಿಯಂತರರು ಬೆಸ್ಕಂ ಎಸ್-7 | ಗೈರು ಹಾಜರಿ |

ವಾರ್ಡ್ ಸಮಿತಿ ಸಭೆಯ ಕಾರ್ಯದರ್ಶಿಗಳು ಮಾತನಾಡಿ ಫೆಬರ್‌ವರಿ ಮಾಹೆಯ ದಿ:19/02/2022 ರಂದು ಬೆಳಿಗ್ಗೆ 9.30 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಅಭಿವೃದ್ಧಿ ಹಾಗೂ ಕುಂದುಕೊರತೆಗಳ ಬಗ್ಗೆ ಚರ್ಚಿಸಲು ಕರೆದಿರುವ ಸಭೆಗೆ ಆಗಮಿಸಿರುವ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮತ್ತು ಸಮಿತಿ ಸದಸ್ಯರಿಗೆ ಸ್ವಾಗತ ಕೋರಿದರು. ಹಾಗೂ ವಾರ್ಡ್ ಸಂಖ್ಯೆ:67ರ ವಾಸ್ತವದ ಬಗ್ಗೆ ಕಿರು ಪರಿಚಯವನ್ನು ಮಂಡಿಸಿದರು.

ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮಾತನಾಡಿ ಸಮಿತಿಯ ಸದಸ್ಯರು ಮತ್ತು ಸ್ಥಳೀಯ ಸಾರ್ವಜನಿಕರು ತಮ್ಮ ತಮ್ಮ ಅವಹಾಲುಗಳನ್ನು ತಿಳಿಸಬೇಕೆಂದು ತಿಳಿಸಿದ ಹಿನ್ನೆಲೆಯಲ್ಲಿ ಸಮಿತಿಯ ಸದಸ್ಯರು ಈ ಕೆಳಕಂಡಂತೆ ವಾರ್ಡ್‌ನಲ್ಲಿ ಕಂಡುಬಂದಿರುವ ಸಮಸ್ಯೆಗಳನ್ನು ಸಭೆಗೆ ಮಂಡಿಸಿದರು.

## <u>ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:</u>

| | |
|---|---|
| ಶ್ರೀ. ಛಾಯಾಪತಿ (ಪ್ರಭಾರ ವಾರ್ಡ್-44) ಕಿರಿಯ ಆರೋಗ್ಯ ಪರೀವಿಕ್ಷಕರು, ವಾರ್ಡ್ -67 | ವಾರ್ಡ್‌ನ ಆದಿತ್ಯ ಹೋಟೆಲ್ ಹತ್ತಿರ ಬೃಹತ್ ನಿರುಗಾಲುವೆ ರವರು ಡೆಬ್ರೀಸ್ ಅನ್ನು ಹಿಂಭಾಗದ ಮನೆಯ ಹತ್ತಿರ ಹಾಕಿರುತ್ತಾರೆ ಡೆಬ್ರೀಸ್ ತೆರವುಗೊಳಿಸಲು ಸಾರ್ವಜನಿಕರು ನಮಗೆ ಕರೆ ಮಾಡಿ ತಿಳಿಸಿರುತ್ತಾರೆ. |
| ಶ್ರೀ. ವಿಶ್ವನಾಥ್ ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಕಿರಿಯ ಆರೋಗ್ಯ ಪರೀವಿಕ್ಷಕರ ದೂರಿಗೆ ಸಂಭಂದಿಸಿದಂತೆ ಕಾರ್ಯಪಾಲಕ ಅಭಿಯಂತರರು, ಬೃಹತ್ ನಿರುಗಾಲುವೆ ರವರಿಗೆ ದೂರವಾಣಿ ಮುಖೇನ ಕರೆ ಮಾಡಿ ಸದರಿ ದೂರಿನ್ವಯ ಡೆಬ್ರೀಸ್ ತೆರವುಗೊಳಿಸಲು ಸೂಚಿಸಿದರು. |
| ಶ್ರೀ. ವಿಶ್ವನಾಥ್ ನೋಡೆಲ್ ಅಧಿಕಾರಿಗಳು | ವಾರ್ಡ್‌ನಲ್ಲಿ ಕಪ್ಪು ಚುಕ್ಕಿ ಪ್ರದೇಶಗಳನ್ನು ಕಣ್ಣಿಗಾವಲು ಮಾಡಿ ಕಸ ಹಾಕುವವರಿಗೆ ದಂಡ ವಿಧಿಸಲು ಹಾಗು ಸಾರ್ವಜನಿಕರಿಗೆ ಅರಿವು ಮೂಡಿಸಲು ನಿರ್ದೇಶಿಸಲಾಯಿತು ಮುಂದುವರಿಯುತ ಒಣ ತ್ಯಾಜ್ಯ ಸಂಗ್ರಹಕಾರರು ಮನೆ ಮನೆಯಿಂದ ಸಂಗ್ರಹಿಸುವ ಒಣ ತ್ಯಾಜ್ಯವನ್ನು ಅವರ ವತಿಯಿಂದಲೇ ಸಂಸ್ಕರಿಸಿ ನಿರ್ವಹಿಸಲ ಸೂಚಿಸುವುದು ಒಂದು ವೇಳೆ ಅನುಪಯುಕ್ತ ಒಣ ತ್ಯಾಜ್ಯವನ್ನು ರಸ್ತೆಗೆ ಬಿಸಾಡಿದಲ್ಲಿ ಅವರಿಗೆ ದಂಡ ವಿಧಿಸಲು ಸೂಚಿಸಲಾಯಿತು. ಹಾಗು ಹಿರಿಯ ಆರೋಗ್ಯ ಪರೀವಿಕ್ಷಕರು ಹಾಗು ಮಾರ್ಷಲ್ ಇಬ್ಬರ ಸಮುಖದಲ್ಲಿ ನಿಷೇದಿತ ಏಕ ಬಳಕೆ ಪ್ಲಾಸ್ಟಿಕ್ ಬಳಕೆದಾರರ ಅಂಗಡಿಗಳನ್ನು ರೈಡ್ ಮಾಡಿ ದಂಡ ಹಾಕಲು ಸೂಚಿಸಿದರು. |
| ಶ್ರೀ. ಗಂಗಯ್ಯ ಹಿರಿಯ ಆರೋಗ್ಯ ಪರೀವಿಕ್ಷಕರು, ವಾರ್ಡ್ ಸಂಖ್ಯೆ-67 | ವಾರ್ಡ್‌ನ ನೋಡೆಲ್ ಅಧಿಕಾರಿಗಳ ದೂರಿನ್ವಯ ಕ್ರಮವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ವಿಶ್ವನಾಥ್ ನೋಡೆಲ್ ಅಧಿಕಾರಿಗಳು | ವಾರ್ಡ್‌ನಲ್ಲಿ ಆರೋಗ್ಯ ಪರೀವಿಕ್ಷಕರಿಗೆ ಏಕ ಬಳಕೆ ನಿಷೇದಿತ ಪ್ಲಾಸ್ಟಿಕ್ ರೈಡ್ ಮಾಡಿ ದಂಡ ಹಾಕಲು ಹಲವಾರು ಭಾರಿ ವಾರ್ಡ್ ಸಮಿತಿ ಸಭೆಯಲ್ಲಿ ಸೂಚಿಸಿದರು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ ಆದ್ದರಿಂದ ಆರೋಗ್ಯ ವೈದ್ಯಾಧಿಕಾರಿಗಳಿಗೆ ಕ್ರಮವಹಿಸಲು ಸೂಚಿಸಿದರು. |



ಪು.ತಿ.ನೋ.

Scanned by CamScanner

| | |
|---|---|
| ಶ್ರೀ. ವಿಶ್ವನಾಥ್ ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಮಿತಿ ಸಭೆಯ ಸದಸ್ಯರ ದೂರಿಗೆ ಸಂಭಂದಿಸಿದಂತೆ ಜಿಯೋ (ಕಾಸಗಿ ಕಂಪನಿಯವರು) 1ನೇ ಎನ್ ಬ್ಲಾಕ್ ಹಾಗು ವಾರ್ಡ್‌ನ ಹಲವಾರು ಕಡೆ ರಸ್ತೆಯನ್ನು ಅಗೆಯುವುದು ಕಂಡುಬಂದು ಸದರಿ ಕಾಸಗಿ ಕಂಪನಿಯವರ ಗುತ್ತಿಗೆದಾರರಿಗೆ ದೂರವಾಣಿ ಮೂಖೇನ ಕರೆ ಮಾಡಿ ಸದರಿ ರಸ್ತೆಯನ್ನು 3 ದಿನಗಳೊಳಗೆ ಸರಿಪಡಿಸಲು ಸೂಚಿಸಿದರು. |
| ಶ್ರೀ.ಸೋಮನಾಥ್, ಸಹಾಯಕ ಅಭಿಯಂತರರು, ಬೆಂ.ಜ.ಮಂ. ಎನ್.ಡಬ್ಲೂ-1 | ವಾರ್ಡ್‌ನ ಒಂದೇ ಮಾತರಂ ಹೋಟೆಲ್ ಹತ್ತಿರ ಕುಡಿಯುವ ನೀರಿನ ಪೈಪ್ ಲೈನ್ ದುರಸ್ತಿಯಾಗಿದ್ದು ಸದರಿ ರಸ್ತೆಯನ್ನು ಅಗೆಯಲು ಅವಕಾಶ ಕಲ್ಪಿಸಲು ಸಹಾಯಕ ಅಭಿಯಂತರರಿಗೆ ಕೋರಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರು ವಾರ್ಡ-67 | ವಾರ್ಡ್‌ನ ಸಹಾಯಕ ಅಭಿಯಂತರರು, ಬೆಂ.ಜ.ಮಂ. ಎನ್.ಡಬ್ಲೂ-1 ರವರು ಕೋರಿರುವಂತೆ ಸದರಿ ರಸ್ತೆಯು ರಸ್ತೆ ಮುಲಭೂತ ಸೌಕರ್ಯ ರವರಿಗೆ ಸೇರಿದ್ದರಿಂದ ರಸ್ತೆಯನ್ನು ಅಗೆಯಲು ಸದರಿ ಕಛೇರಿಯವರನ್ನು ಸಂಪರ್ಕಿಸಲು ಸಭೆಯಲ್ಲಿ ತಿಳಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರು ವಾರ್ಡ-67 | ವಾರ್ಡ್‌ನ ವ್ಯಾಪ್ತಿಯಲ್ಲಿರುವ ಅರ್ಹ ಫಲಾನುಭವಿಗಳಿಗೆ ಲ್ಯಾಪ್‌ಟಾಪ್ ನೀಡಲು ರೂ 60.00 ಲಕ್ಷಗಳಷ್ಟು ಅನುದಾನ ಲಭ್ಯವಿದ್ದು ಅಡಳಿತಾತ್ಮಕ ಅನುಮೋದನೆ ಹಾಗು ತಾಂತ್ರಿಕ ಮಂಜುರಾತಿ ದೊರೆತಿದ್ದು ಅದರಂತೆ ಸಮಾಜ ಕಲ್ಯಾಣ ಇಲಾಖೆಯಿಂದ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುರುತ್ತದೆ. ಈ ವಿಷಯವನ್ನು ವಾರ್ಡ್ ಸಮಿತಿ ಸಭೆಯಲ್ಲಿ ಎಲ್ಲಾ ಸದಸ್ಯರ ಗಮನಕ್ಕೆ ತಂದು ಒಟ್ಟು ಸಂಖ್ಯೆ 121 ಫಲಾನುಭವಿಗಳಿಗೆ ಲ್ಯಾಪ್‌ಟಾಪ್‌ಗಳನ್ನು ವಿತರಿಸಲು ಕೋರಿ ಸಭೆಯಲ್ಲಿ ಮಂಡಿಸಿಲಾಯಿತು. |
| ಶ್ರೀ.ಉದಯ ಶಂಕರ್ 1ನೇ 'ಆರ್' ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು. | ವಾರ್ಡ್‌ನ ರಾಜಾಜಿನಗರ 1ನೇ ಆರ್ ಬ್ಲಾಕ್‌ನಲ್ಲಿ ಇಸ್ಕಾನ್ ದೇವಾಲಯದ ಹತ್ತಿರ ಕಸ ಹಾಕುತ್ತಿದ್ದಾರೆ ಸಮಸ್ಯೆ ಬಗೆ ಹರಿಸಲು ಚೈನ್‌ಲಿಂಕ್ ಫೆನ್ಸಿಂಗ್ ಅಳವಡಿಸಲು ಸಭೆಯಲ್ಲಿ ಕೋರಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರು ವಾರ್ಡ-67 | ವಾರ್ಡ್‌ನ ಸಮಿತಿ ಸದಸ್ಯರ ದೂರಿನಂತೆ ಸ್ಥಳ ಪರಿಶೀಲಿಸಿ ಕ್ರಮ ವಹಿಸಲಾಗುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ಆರ್ ರಂಗರಾಜು ವಾರ್ಡ್ ನಾಗರೀಕರು. | ವಾರ್ಡ್‌ನ ರಾಜಾಜಿನಗರ 'ಎನ್' ಬ್ಲಾಕ್‌ನಲ್ಲಿ ಹಲವು ಮರಗಳ ಟ್ರೀಂಮಿಂಗ್ ಮಾಡಬೇಕು |
| ಶ್ರೀ. ವಿಶ್ವನಾಥ್ ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಅರಣ್ಯ ಇಲಾಖೆಗೆ ಸಂಭಂದಿಸಿದ ಪಶ್ಚಿಮ ವಿಭಾಗದ ಆರ್.ಎಫ್.ಒ ರವರು ಸದರಿ ದೂರುಗಳ ಅನ್ವಯ ಕ್ರಮವಹಿಸಲು ಸೂಚಿಸಿದರು. |
| ಶ್ರೀ.ಆನಂದ್ ಮೂರ್ತಿ ಸಹಾಯಕ ಅಭಿಯಂತರರು, ಬೆಸ್ಕಂ ಎನ್1 ಉಪವಿಭಾಗ. | ವಾರ್ಡ್‌ನ ಉದಯಕುಮಾರ್ ಉದ್ಯಾನದ ಹತ್ತಿರ ವಿದ್ಯುತ್ ಲೈನ್ ದುರಸ್ಥಿಗಾಗಿ ರಸ್ತೆ ಅಗೆಯಲು ಅನುಮತಿ ನೀಡಲು ಆನ್‌ಲೈನ್‌ನಲ್ಲಿ ಅರ್ಜಿ ನೀಡಿರುತ್ತೆವೆ ಸದರಿ ರಸ್ತೆ ಅಗೆಯಲು ಅನುಮತಿ ನೀಡುಲು ಸಭೆಯಲ್ಲಿ ಕೋರಿದರು. |
| ಶ್ರೀ. ವಿಶ್ವನಾಥ್ ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಹಾಯಕ ಅಭಿಯಂತರರು ಸ್ಥಳ ಪರಿಶೀಲಿಸಿ ಕ್ರಮ ವಹಿಸಲು ಸೂಚಿಸಿದರು. |
| ಶ್ರೀ. ವಿಶ್ವನಾಥ್ ನೋಡೆಲ್ ಅಧಿಕಾರಿಗಳು | ರಿಟ್ ಅರ್ಜಿ ಸಂಖ್ಯೆ:41517/2019 ಪ್ರಕರಣದಲ್ಲಿ ದಿನಾಂಕ:19/09/2019 ಮತ್ತು ದಿನಾಂಕ:25/11/2019 ರಂದು ನೀಡಿರುವ ನಿರ್ದೇಶನಗಳನ್ನು ಗಮನಕ್ಕೆ ತರುತ್ತ ವಾರ್ಡ್‌ನಲ್ಲಿ ಕಟ್ಟಡವನ್ನು ನಕ್ಷೆಗೆ ವ್ಯತ್ತಿರಿಕ್ತವಾಗಿ ನಿರ್ಮಿಸುತ್ತಿರುವ ಕಟ್ಟಡಗಳಿಗೆ 313 ನೋಟಿಸ್ ನೀಡಲು ಸೂಚಿಸಿದರು ಹಾಗು ಸಭೆಯಲ್ಲಿ ಹಾಜರಿದ್ದ ಕ್ಷೇಮಾಭಿವೃದ್ಧಿ ಸಂಘದವರಿಗೆ ವಾರ್ಡ್‌ನಲ್ಲಿ ನಕ್ಷೆಗೆ ವ್ಯತ್ತಿರಿಕ್ತವಾಗಿ ನಿರ್ಮಿಸುತ್ತಿರುವ ಕಟ್ಟಡಗಳ ಬಗ್ಗೆ ಅರಿವು ಮೂಡಿಸಲು ಸೂಚಿಸಿದರು. |



ಪು.ತಿ.ನೋ.

Scanned by CamScanner

| | |
|---|---|
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರು ವಾರ್ಡ್–67 | ವಾರ್ಡ್‌ನಲ್ಲಿ ನಕ್ಷೆಗೆ ವ್ಯತಿರಿಕ್ತವಾಗಿ ನಿರ್ಮಿಸುತ್ತಿರುವ ಕಟ್ಟಡಗಳಿಗೆ 313 ನೋಟಿಸ್ ಈಗಾಗಲೇ ನೀಡುತ್ತಿದ್ದೇವೆ ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ. ಆರ್ ರಂಗರಾಜು ವಾರ್ಡ್ ನಾಗರೀಕರು. | ವಾರ್ಡ್‌ನ ರಾಜಾಜಿನಗರ 1ನೇ ಬ್ಲಾಕ್‌ನಲ್ಲಿ ಉಚಿತ ಯೋಗ ತರಬೇತಿಯನ್ನು ಗಣೇಶ ದೇವಾಲಯದ ಆವರಣದಲ್ಲಿ ನೆಡೆಸುತ್ತಿದ್ದಾರೆ ಪಾಲಿಕೆ ವತಿಯಿಂದ ಯೋಗ ತರಬೇತಿಯನ್ನು ನೆಡೆಸಲು ಜಾಗ ನೀಡಿದ್ದಲ್ಲಿ ಅನೇಕ ಸಾರ್ವಜನಿಕರಿಗೆ ಅನುಕುಲವಾಗುತ್ತದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರು ವಾರ್ಡ್–67 | ವಾರ್ಡ್‌ನಲ್ಲಿ ಎಲ್ಲಾ ಪಾಲಿಕೆ ಕಟ್ಟಡಗಳು ಬರ್ತಿಯಾಗಿದ್ದು ಹೊಸದಾಗಿ ಉದಯಕುಮಾರ್ ಉದ್ಯಾನದ ಹತ್ತಿರ ನಿರ್ಮಾಣವಾಗುತ್ತಿರುವ ಕಟ್ಟಡದಲ್ಲಿ ಯೋಗ ಅಭ್ಯಾಸವನ್ನು ಮಾಡಲು ಪ್ರತ್ಯೇಕ ಕೊಠಡಿ ಮಿಸಲಿಡುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ವಿಶ್ವನಾಥ್ ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಹಾಯಕ ಅಭಿಯಂತರು ಅಭಾಂಡೆಡ್ ವಾಹನಗಳನ್ನು ತೆರವುಗೊಳಿಸಲು ತೆಗೆದುಕೊಂಡಿರುವ ಕ್ರಮದ ಬಗ್ಗೆ ಮಾಹಿತಿ ಕಲೆ ಹಾಕಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರು ವಾರ್ಡ್–67 | ವಾರ್ಡ್‌ನಲ್ಲಿ ರಾಜಾಜಿನಗರ ಸಂಚಾರಿ ಪೊಲೀಸ್ ಠಾಣೆರವರು ನೀಡಿರುವಂತೆ 5 ವಾಹನಗಳಿಗೆ ನೋಟಿಸ್ ಅಂಟಿಸಲಾಗಿದೆ ಹಾಗು ಮುಖ್ಯ ಆಯುಕ್ತರ ಆದೇಶದಂತೆ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ. ವಿಶ್ವನಾಥ್ ನೋಡೆಲ್ ಅಧಿಕಾರಿಗಳು | ವಾರ್ಡ್ ಪರೀವಿಕ್ಷಣೆ ಸಮಯದಲ್ಲಿ ಬಸವೇಶ್ವರ ಶಾಲೆಯ ಹತ್ತಿರ ಒಣಗಿರುವ ಎಲೆಗಳಿಗೆ ಬೆಂಕಿ ಹಚ್ಚುತ್ತಿರುವುದು ಕಂಡುಬಂದಿರುತ್ತದೆ ಕೂಡಲೇ ವಾರ್ಡ್‌ನ ಆರೋಗ್ಯ ಪರೀವಿಕ್ಷಕರಿಗೆ ಕ್ರಮವಹಿಸಲು ಸೂಚಿಸಿದರು ಹಾಗು ಶಾಲೆಯವರಿಗೆ ಕಿರಿಯ ಆರೋಗ್ಯ ಪರೀವಿಕ್ಷಕರು ಮತ್ತು ಮಾರ್ಷಲ್ ರೂ 200 ದಂಡ ವಿಧಿಸಿದರು ಮತ್ತು ಬೆಂಕಿಯನ್ನು ನಂದಿಸಿದರು. |
| ಶ್ರೀ. ವಿಶ್ವನಾಥ್ ನೋಡೆಲ್ ಅಧಿಕಾರಿಗಳು | ವಾರ್ಡ್‌ನಲ್ಲಿ ಬೋರ್‌ವೆಲ್ ವಿಭಾಗದವರು ನಿರ್ವಹಣೆ ಮಾಡುತ್ತಿರುವ ಬೋರ್‌ವೆಲ್‌ಗಳ ಬಗ್ಗೆ ಮಾಹಿತಿ ಕಲೆ ಹಾಕಿದರು. |
| ಶ್ರೀಮತಿ. ಆಶಾ ಸಹಾಯಕ ಕಾರ್ಯಪಾಲಕ ಅಭಿಯಂತರರು. ಬೋರ್‌ವೆಲ್ ವಿಭಾಗ | ವಾರ್ಡ್‌ನಲ್ಲಿ ಬೋರ್‌ವೆಲ್ ವಿಭಾಗದಿಂದ 33 ಬೋರ್‌ವೆಲ್‌ಗಳನ್ನು ನಿರ್ವಹಣೆ ಮಾಡುತ್ತಿದ್ದೇವೆ ಹಾಗು ಈ 33 ಬೋರ್‌ವೆಲ್‌ಗಳಲ್ಲಿ ಯಾವುದೇ ಬೋರ್‌ವೆಲ್‌ಗಳು ದುರಸ್ಥಿ ಬಂದಲ್ಲಿ ತಮ್ಮ ವಿಭಾಗದ ವತಿಯಿಂದ ನಿರ್ವಹಣೆ ಮಾಡಲಾಗುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ವಿಶ್ವನಾಥ್ ನೋಡೆಲ್ ಅಧಿಕಾರಿಗಳು | ವಾರ್ಡ್‌ನಲ್ಲಿ ತುಂಡಾಗಿ ರಸ್ತೆ ಹಾಗು ಫುಟ್‌ಫತ್ ಮೇಲೆ ಬಿದ್ದಿರುವ ಒ.ಎಫ್.ಸಿ ಕೇಬಲ್ ತೆರೆವುಗೊಳಿಸಲು ಸಹಾಯಕ ಅಭಿಯಂತರರಿಗೆ ಸೂಚಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರು ವಾರ್ಡ್–67 | ವಾರ್ಡ್‌ನ ನೋಡೆಲ್ ಅಧಿಕಾರಿಗಳು ಸೂಚಿಸಿರುವಂತೆ ಕ್ರಮ ವಹಿಸಲಾಗುವುದಾಗಿ ಸೂಚಿಸಿದರು. |
| ಶ್ರೀ. ಗಂಗಯ್ಯ ಹಿರಿಯ ಆರೋಗ್ಯ ಪರೀವಿಕ್ಷಕರು, ವಾರ್ಡ್ ಸಂಖ್ಯೆ–67 | ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿನಿತ್ಯ ಎಂದಿನಂತೆ ಕೋವಿಡ್ ಪರೀಕ್ಷೆಗಳನ್ನು ಕೈಗೊಳ್ಳುತ್ತಿದ್ದು, ಇತ್ತೀಚಿನ ದಿನಗಳಲ್ಲಿ ಹೊಸ ಪ್ರಕರಣಗಳು ಕಂಡುಬಂದಿರುವುದಿಲ್ಲ ಮತ್ತು ಯಾವುದೇ ಡೆತ್ ಕೇಸ್‌ಗಳು ಕಂಡುಬಂದಿರುವುದಿಲ್ಲ ಎಂದು ಸಭೆಗೆ ಮಾಹಿತಿ ಒದಗಿಸಿದರು. |

ವಿಶ್ವನಾಥ.ಮು



ಪು.ತಿ.ನೋ.

Scanned by CamScanner

ವಾರ್ಡ್ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ದೃಢೀಕೃತ ಮಾಹಿತಿಗಳನ್ನು ತಪ್ಪದೇ ವಾರ್ಡ್ ಕಮಿಟಿ ವಾರ್ಡ್–67 ವಾಟ್ಸ್ ಆಪ್ ಗ್ರೂಪ್ ನಲ್ಲಿ ಮತ್ತು ಪ್ರತೀ ವಾರ್ಡ್ ಸಮಿತಿ ಸಭೆಯಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯ ಗೊಳಿಸಲಾಯಿತು. ಸಭೆಯ ಕೊನೆಯಲ್ಲಿ ಸಮಿತಿ ಕಾರ್ಯದರ್ಶಿ ರವರು ಸಮಿತಿ ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

**ಪ್ರತಿಯನ್ನು**

1. ಮಾನ್ಯ ವಲಯ ಉಪಆಯುಕ್ತರು (ಆಡಳಿತ), ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ಕೇಂದ್ರ ರವರ ಅವಗಾಹನ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ಪಶ್ಚಿಮ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

ಕಾರ್ಯದರ್ಶಿ ಹಾಗೂ
**ಸಹಾಯಕ ಅಭಿಯಂತರರು, ವಾರ್ಡ್– 67**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

19/02/2022
ಅಧ್ಯಕ್ಷರು ಹಾಗೂ
**ನೋಡಲ್ ಅಧಿಕಾರಿಗಳು ವಾರ್ಡ್– 67**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

Scanned by CamScanner